**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ**
**ಶ್ರೀ ಎಸ್.ಎಲ್ ಭೋಜೇಗೌಡ, ಇವರು ಮಂಡಿಸಿರುವ ನಿಯಮ-330 ಕ್ಕೆ ಉತ್ತರ ನೀಡುವ ಕುರಿತು**

**ವಿಷಯ:-**

ಸರ್ಕಾರಿ ಶಾಲೆಗಳಲ್ಲಿ/ ಅನುದಾನಿತ / ಅನುದಾನರಹಿತ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಸಿಗಬೇಕಾದ ಮೂಲಭೂತ ಸೌಲಭ್ಯಗಳು ಕಾಲಕಾಲಕ್ಕೆ ಸಿಗದೇ, ಶಿಕ್ಷಕರುಗಳು ಪರಿತಪಿಸುವಂತೆ ಆಗಿರುವುದು ಶೋಚನೀಯ ಸಂಗತಿ. ಸರ್ಕಾರಿ/ ಅನುದಾನಿತ/ಅನುದಾನರಹಿತ ಶಾಲೆಗಳ ಶಿಕ್ಷಕರುಗಳು ಹಲವು ರೀತಿಯ ಬೇಡಿಕೆ ಮತ್ತು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಶಿಕ್ಷಕರ ಗೋಳನ್ನು ಸರ್ಕಾರವು ಕೇಳುವುದರಲ್ಲಿ ವಿಫಲವಾಗಿದೆ. ಶಿಕ್ಷಕರ ಸಮಸ್ಯೆಗಳು ಕಗ್ಗಂಟ್ಟಿನಿಂದ ಕೂಡಿದ್ದೂ, ಅದನ್ನು ಬಿಡುಸುವಲ್ಲಿ ಸರ್ಕಾರವು ವಿಫಲವಾಗಿದೆ. ಸದರಿ ಶಿಕ್ಷಕರುಗಳಿಗೆ ಕಾಲ ಕಾಲಕ್ಕೆ ಬಡ್ತಿ, ವಿವಿಧ ರೀತಿಯ ಸೌಲಭ್ಯಗಳು ದೊರಕುತ್ತಿದೆಯೇ ಎಂಬುದು ಅನುಮಾನ. ಆದ್ದರಿಂದ, ಶಿಕ್ಷಕರುಗಳ ಹಲವಾರು ಸಮಸ್ಯೆಗಳ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಬಳಿ ಪ್ರಸ್ತಾಪಿಸಲು ಅನುಮತಿ ಕೋರುತ್ತೇನೆ.

**ಉತ್ತರ:**

**ಪ್ರಾಥಮಿಕ ಶಾಲಾ ಶಿಕ್ಷಕರಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿ ಹಾಗೂ ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ:**

1. ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ 2016 ರ ವೃಂದ ಮತ್ತು ನೇಮಕಾತಿ ನಿಯಮಗಳು ಚಾಲ್ತಿಯಲ್ಲಿದ್ದು, ಅದರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ (ಪಿ.ಎಸ್.ಟಿ) ವೃಂದಕ್ಕೆ ಅರ್ಹತೆ ಮತ್ತು ಜೇಷ್ಠತೆ ಹೊಂದಿರುವ ಶಿಕ್ಷಕರಿಗೆ ಬಡ್ತಿ ನೀಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಆದರೆ ಪದವೀಧರ ಪ್ರಾಥಮಿಕ ಶಾಲಾ (ಜಿ.ಪಿ.ಟಿ) ಶಿಕ್ಷಕರ ಹುದ್ದೆಗೆ ಬಡ್ತಿಗೆ ಸಂಬಂಧಿಸಿದಂತೆ ಮಾನದಂಡಗಳು ನಿಗದಿಯಾಗಿರುವುದಿಲ್ಲ. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 6 ರಿಂದ 8ನೇ ತರಗತಿ ಪದವೀಧರ ಪ್ರಾಥಮಿಕ ಶಿಕ್ಷಕರಿಗೆ ಪ್ರೌಢಶಾಲಾ ಸಹಶಿಕ್ಷಕರು ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಕುರಿತು ಮಾನ್ಯ ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ಗಳಲ್ಲಿ ಶ್ರೀ ನಾರಾಯಣ ಬಾಳಪ್ಪ ಮತ್ತಿತರರು ದಾವೆ ದಾಖಲಿಸಿದ್ದು, ಸದರಿ ದಾವೆಯಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:12.05.2021 ರಂದು ತೀರ್ಪು ನೀಡಿರುತ್ತದೆ.
2. ಸದರಿ ತೀರ್ಪಿನಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ನೀಡಿರುವ ಬಡ್ತಿಗಳನ್ನು ಹಿಂಪಡೆಯಲು ಸೂಚಿಸಲಾಗಿರುತ್ತದೆ. ಆದ್ದರಿಂದ ಮಾನ್ಯ ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ದಿನಾಂಕ:12.05.2021 ರ ತೀರ್ಪು ಬಂದ ನಂತರ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತಡೆಹಿಡಿಯಲು ಸೂಚಿಸಲಾಗಿರುತ್ತದೆ.

3. ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ಮತ್ತು 857-917/2021 ತೀರ್ಪನ್ನು ಪ್ರಶ್ನಿಸಿ ಘನ ಉಚ್ಛನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅರ್ಜಿ ಸಂಖ್ಯೆ : 16936/2021, 18205/2021 ಮತ್ತು 11088/2022 ಅನ್ನು ದಾಖಲಿಸಲಾಗಿರುತ್ತದೆ. ಸದರಿ ರಿಟ್ ಅರ್ಜಿಗಳಲ್ಲಿ ನ್ಯಾಯಾಲಯವು ದಿನಾಂಕ:31.08.2024 ರಂದು ತೀರ್ಪು ನೀಡಿದ್ದು, ರಿಟ್ ಅರ್ಜಿಗಳನ್ನು ವಜಾಗೊಳಿಸಿರುತ್ತದೆ.
4. ಕರ್ನಾಟಕ ಶಿಕ್ಷಣ ಇಲಾಖೆ ಸೇವೆಗಳು (ಸಾರ್ವಜನಿಕ ಶಿಕ್ಷಣ ಇಲಾಖೆ)(ನೇಮಕಾತಿ)(ತಿದ್ದುಪಡಿ)ನಿಯಮಗಳು, 2024 ಅನ್ನು ಪ್ರಕಟಿಸಿದ್ದು, ಅದರಲ್ಲಿ ಪದವೀಧರ ಪ್ರಾಥಮಿಕ ಶಾಲಾ (ಜಿ.ಪಿ.ಟಿ) ಶಿಕ್ಷಕರಿಗೂ ಸಹ ಬಡ್ತಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.
5. ಪ್ರಸ್ತುತ ಕೆ.ಎ.ಟಿ ಅರ್ಜಿ ಸಂಖ್ಯೆ:3443-3503/2020 ಮತ್ತಿತರ ದಾವೆಗಳ ಅನುಷ್ಠಾನ ಸಂಬಂಧ ಮಾನ್ಯ ಕೆ.ಎ.ಟಿ ಇಲ್ಲಿ ನಿಂದನಾ ದಾವೆ ಸಂಖ್ಯೆ: 667-697/2024, 87-163/2025 ಮತ್ತು 164-274/2025 ಗಳನ್ನು ಅರ್ಜಿದಾರರು ದಾಖಲಿಸಿರುತ್ತಾರೆ.
6. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ ರಿಟ್ ಪಿಟಿಷನ್ ಸಂಖ್ಯೆ : 16936/2021 ಮತ್ತಿತರ ಸಂಬಂಧಿತ ದಾವೆಗಳ ತೀರ್ಪನ್ನು ಪುನರ್ ಪರಿಶೀಲಿಸಲು ಕೋರಿ ಮಾನ್ಯ ಉಚ್ಛ ನ್ಯಾಯಾಲಯ ಬೆಂಗಳೂರು ಇಲ್ಲಿ Review Petition ಸಂಖ್ಯೆ:433/2025 ಅನ್ನು ದಾಖಲಿಸಲಾಗಿರುತ್ತದೆ.
7. ಕೆ.ಎ.ಟಿ ಯಲ್ಲಿ ದಾಖಲಾಗಿರುವ ನಿಂದನಾ ದಾವೆಗಳು ಮುಕ್ತಾಯಗೊಂಡ ನಂತರ ಮತ್ತು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ದಾಖಲಿಸಿರುವ Review Petition ಸಂಖ್ಯೆ:433/2025 ನಲ್ಲಿ ತೀರ್ಪು ಬಂದ ನಂತರ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಗೆ ನಿಯಮಗಳನುಸಾರ ಬಡ್ತಿ ನೀಡಲು ಕ್ರಮವಹಿಸಬೇಕಾಗಿರುತ್ತದೆ.
8. ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಹುದ್ದೆಯಿಂದ ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡಲು ನಿಯಮಾನುಸಾರ ಕ್ರಮ ವಹಿಸಲಾಗುತ್ತಿದೆ.
9. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡುವ ಸಂಬಂಧ ಅರ್ಹತಾ ಪರೀಕ್ಷೆ ನಡೆಸಲು ಅಧಿಸೂಚನೆ ಹೊರಡಿಸುವಂತೆ ದಿನಾಂಕ:27.11.2025 ರಲ್ಲಿ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆಯಿಂದ ಕೋರಲಾಗಿದೆ. ಅದರಂತೆ ಕೇಂದ್ರಿಯ ದಾಖಲಾತಿ ಘಟಕ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಅರ್ಹತಾ ಪರೀಕ್ಷೆ ನಡೆಸಿ, ಅರ್ಹ ಸಹ ಶಿಕ್ಷಕರ ಪಟ್ಟಿಯನ್ನು ಸಲ್ಲಿಸಿದ ನಂತರ ಬಡ್ತಿ ನೀಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

**ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ:**

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಸಂಬಂಧಿಸಿದಂತೆ, ಕಾಲ-ಕಾಲಕ್ಕೆ ಚಾಲ್ತಿ ನಿಯಮಗಳನುಸಾರ ನೀಡಬೇಕಾದ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ಪ್ರತಿ ಮಾಹೆಯ 05ನೇ ತಾರೀಖಿನೊಳಗ ಸಕಾಲದಲ್ಲಿ ವೇತನ ಪಾವತಿಯಾಗುವಂತೆ ಕ್ರಮವಹಿಸಲಾಗಿದೆ.

ಆದಾಗ್ಯೂ ಕೆಲವೊಂದು ಬೇಡಿಕೆಗಳಿಗೆ ಸಂಬಂಧಿಸಿದಂತೆ. ಆರ್ಥಿಕ ವೆಚ್ಚಗಳನ್ನು ಮತ್ತು ಸರ್ಕಾರದ ನೀತಿಯ ವಿಷಯಗಳು ಹಾಗೂ ಶಿಕ್ಷಕರ ಸಮಸ್ಯೆಗಳ ಕುರಿತು ಕಾಲ-ಕಾಲಕ್ಕೆ ಪ್ರಸ್ತಾವನೆಗಳನ್ನು